ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 23–11–2020

# ಮಾಧ್ಯಮ ಆಮಂತ್ರಣ

1. ಸರ್ಕಾರಿ ಶಾಲೆಗಳ ದತ್ತು ಸ್ವೀಕಾರ ಸಮಾರಂಭ :

ಕಾರ್ಯಕ್ರಮ ಉದ್ಘಾಟನೆ, ದತ್ತು ಸ್ವೀಕಾರ ಪತ್ರಗಳ ವಿತರಣೆ ಹಾಗೂ ಶಿಕ್ಷಣ ಸುಧಾರಣಾ ಶಿಫಾರಸ್ಸುಗಳ ಪುಸ್ತಕ ಬಿಡುಗಡೆ :

ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಮುಖ್ಯ ಅತಿಥಿಗಳು :

ಡಾ : ಅಶ್ವಥ್ ನಾರಾಯಣ, ಸಿ.ಎನ್. ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಐ.ಟಿ. ಮತ್ತು ಬಿ.ಟಿ. ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಸಚಿವರು

ಎಸ್. ಸುರೇಶ್‌ಕುಮಾರ್, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು

ದಿನಾಂಕ : 24–11–2020 ಮಂಗಳವಾರ ಸಮಯ : ಬೆಳಿಗ್ಗೆ 10–30 ಗಂಟೆಗೆ

ಸ್ಥಳ : ಬ್ಯಾಂಕ್ವೆಟ್‌ಹಾಲ್, ವಿಧಾನ ಸೌಧ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಪ್ರಮಾಣ ವಚನ ಸಮಾರಂಭ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ):

ಇತ್ತೀಚಿಗೆ ನಡೆದ ವಿಧಾನಸಭೆಯ ಉಪಚುನಾವಣೆಯಲ್ಲಿ ಆಯ್ಕೆಯಾದ ಶಾಸಕರಾದ ರಾಜರಾಜೇಶ್ವರಿನಗರ ವಿಧಾನಸಭೆ ಕ್ಷೇತ್ರದ ಮುನಿರತ್ನ ಹಾಗೂ ಸಿರಾ ಕ್ಷೇತ್ರದ ಡಾ. ಸಿ. ಎಮ್. ರಾಜೇಶ್‌ಗೌಡ ಅವರು ಇಂದು ಪ್ರಮಾಣವಚನ ಸ್ವೀಕರಿಸಿದರು.

ಇಂದು ವಿಧಾನಸೌಧದಲ್ಲಿ ಹಮ್ಮಿಕೊಳ್ಳಲಾಗಿದ್ದ ಸರಳ ಸಮಾರಂಭದಲ್ಲಿ ರಾಜರಾಜೇಶ್ವರಿನಗರದ ಶಾಸಕರಾದ ಮುನಿರತ್ನ ಅವರು ತಾಯಿ ರಾಜರಾಜೇಶ್ವರಿ ಹೆಸರಿನಲ್ಲಿ ಹಾಗೂ ಸಿರಾ ಶಾಸಕರಾದ ಡಾ. ಸಿ. ಎಮ್. ರಾಜೇಶ್‌ಗೌಡ ಅವರು ಭಗವಂತನ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ವಿಧಾನಸಭೆಯ ಅಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ, ವಿಧಾನಸಭೆಯ ಕಾರ್ಯದರ್ಶಿ ಶ್ರೀಮತಿ ಎಂ. ಕೆ. ವಿಶಾಲಾಕ್ಷಿಯವರು ಹಾಗೂ ಹಲವು ಗಣ್ಯರು ಉಪಸ್ಥಿತರಿದ್ದರು.

## ಕರ್ನಾಟಕ ರಾಜ್ಯ ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆಯಲ್ಲಿ ದೇಶದಲ್ಲೆ ಮುಂಚೂಣಿಯಲ್ಲಿದೆ : ಬಿ.ಎಸ್.ಯಡಿಯೂರಪ್ಪ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ): ಕರ್ನಾಟಕ ರಾಜ್ಯ ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆಯಲ್ಲಿ ದೇಶದಲ್ಲೆ ಮುಂಚೂಣಿಯಲ್ಲಿದೆ. ವಿಶ್ವದ ಜೀವವೈವಿಧ್ಯತಾಣಗಳು ಎಂದು ಹೆಸರಾಗಿರುವ ಪಶ್ಚಿಮಘಟ್ಟಗಳ ಬಹು ಭಾಗ ನಮ್ಮ ರಾಜ್ಯದಲ್ಲಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.

ಅವರು ಇಂದು ವಿಧಾನಸೌಧನ ಬ್ಯಾಂಕ್ವೆಂಟ್ ಹಾಲ್‌ನಲ್ಲಿ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆ ಕರ್ನಾಟಕ ಅರಣ್ಯ ಇಲಾಖೆ 2017,2018 ಹಾಗೂ 2019ನೇ ಸಾಲಿನ ರಾಜ್ಯದ ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆಯಲ್ಲಿ ಗಣನೀಯ ಸಾಧನೆ ಮಾಡಿದ ಸಿಬ್ಬಂದಿ ಹಾಗೂ ಅಧಿಕಾರಿಗಳಿಗೆ ಮುಖ್ಯಮಂತ್ರಿಗಳ ಪದಕ ಪ್ರದಾನ ಮಾಡಿ ಮಾತನಾಡಿದರು.

ಪೂರ್ಣಚಂದ್ರ ತೇಜಸ್ವಿ ಅವರು ಹೇಳಿರುವಂತೆ ಇಡೀ ಜಗತ್ತು ಒಂದಕ್ಕೊಂದು ಬೆಸೆದುಕೊಂಡು ಸಮತೋಲನದಲ್ಲಿ ನಿಂತಿರುವ ಬಲೆ. ಈ ಬಲೆಯಲ್ಲಿ ಮುಖ್ಯವಾದ ಭಾಗ ಅರಣ್ಯಗಳು ಮತ್ತು ವನ್ಯಜೀವಿಗಳು. ಇವುಗಳ ಉಳಿವಿನಲ್ಲಿ ಮನುಕುಲದ ಅಸ್ತಿತ್ವ ಅಡಗಿದೆ ಎಂದರು.

ಈ ಅರಣ್ಯಗಳು ಜೀವ ಜಲದ ಆಗರಗಳಾಗಿದ್ದು, ನದಿಗಳ ಉಗಮ ಸ್ಥಾನವಾಗಿದೆ. ನೈಸರ್ಗಿಕ ಸಂಪತ್ತನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಸಂವಿಧಾನಿಕ ಜವಬ್ದಾರಿ ಮತ್ತು

ಕರ್ತವ್ಯವಾಗಿದೆ. ಅರಣ್ಯ ಮತ್ತು ವನ್ಯಜೀವಿ ಸಂಪನ್ಮೂಲವನ್ನು ರಕ್ಷಿಸಲು ಕರ್ನಾಟಕ ರಾಜ್ಯದ ಶೇ. 22 ಬಹುಭಾಗವನ್ನು ಮೀಸಲಿರಿಸಲಾಗಿದೆ. ಇವುಗಳಲ್ಲಿ ರಕ್ಷಿತ ಅರಣ್ಯಗಳು, ರಾಷ್ಟ್ರೀಯ ಉದ್ಯಾನವನಗಳಿದ್ದು, ನಮ್ಮ ರಾಜ್ಯ ವನ್ಯಜೀವಿ ಸಂಪತ್ತಿನಲ್ಲಿ ಕೂಡ ಅಗ್ರಸ್ಥಾನದಲ್ಲಿದೆ.

ನಮ್ಮ ರಾಜ್ಯ ಶೇ.10 ರಷ್ಟು ಹುಲಿ ಮತ್ತು ಶೇ. 25 ರಷ್ಟು ಆನೆಗಳ ತಾಣವಾಗಿದೆ . ಆನೆಗಳ ಸಂಖ್ಯೆಯಲ್ಲಿ ರಾಜ್ಯ ಅಗ್ರ ಸ್ಥಾನದಲ್ಲಿದ್ದು 524 ಹುಲಿಗಳನ್ನು ಹೊಂದಿದ್ದು, ದೇಶದಲ್ಲಿ ಎರಡನೇ ಸ್ಥಾನವನ್ನು ಹೊಂದಿದೆ. ಎಲ್ಲಾ ನೈಸರ್ಗಿಕ ಸಂಪನ್ಮೂಲಗಳನ್ನು ರಕ್ಷಿಸಿ ಅಭಿವೃದ್ಧಿಪಡಿಸುವ ಜವಾಬ್ದಾರಿ ಅರಣ್ಯ ಇಲಾಖೆಯ ಮೇಲಿದೆ.

ಹೆಚ್ಚುತ್ತಿರುವ ಜನಸಂಖ್ಯೆ, ಜನರ ಜೀವನ ಶೈಲಿ, ನಗರೀಕರಣ ಇತ್ಯಾದಿಗಳಿಂದ ಅರಣ್ಯ ಮತ್ತು ವನ್ಯಜೀವಿಗಳ ಅಸ್ತಿತ್ವಕ್ಕೆ ಹೆಚ್ಚು ಒತ್ತಡ ಬೀರುತ್ತಿದೆ. ಇಂತಹ ಸನ್ನೀವೇಶದಲ್ಲಿ ಎಲ್ಲಾ ಒತ್ತಡಗಳನ್ನು ಮೀರಿ ಅರಣ್ಯ ಇಲಾಖೆಯ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದರು.

ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವ ಆನಂದ್ ಸಿಂಗ್ ಮಾತನಾಡಿ, ಇಡೀ ದೇಶದಲ್ಲಿ ಬೇರೆ ಬೇರೆ ರಾಜ್ಯಗಳು ನಮ್ಮ ಅರಣ್ಯ ಇಲಾಖೆಯನ್ನು ಮಾದರಿಯನ್ನಾಗಿಟ್ಟುಕೊಂಡು ಕಾರ್ಯನಿರ್ವಹಣೆ ಮಾಡುತ್ತಿವೆ. ಅರಣ್ಯ ಉಳಿಯುವುದಕ್ಕೆ ಮುಂಚೂಣಿಯಲ್ಲಿರುವ ಅರಣ್ಯ ಅಧಿಕಾರಿಗಳು, ಅರಣ್ಯ ರಕ್ಷಕರು ತಮ್ಮ ಜೀವನನ್ನು ಪಣವಾಗಿಟ್ಟುಕೊಂಡು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದರು.

ಸಮಾರಂಭದಲ್ಲಿ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಡಾ. ಸಂದೀಪ್ ದವೆ, ಅರಣ್ಯ ಪಡೆಯ ಮುಖ್ಯಸ್ಥರಾದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಸಂಜಯ್ ಮೋಹನ್ ಹಾಗೂ ಮುಖ್ಯಮಂತ್ರಿಗಳ ಪದಕ ಪಡೆದ 75 ಸಿಬ್ಬಂದಿ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

## ಪ್ರಥಮ ವರ್ಷದ ಡಿ. ಫಾರ್ಮ್ ಕೋರ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ):

ಬೆಂಗಳೂರಿನ ಸುಬ್ಬಯ್ಯ ವೃತ್ತದಲ್ಲಿರುವ ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ ಮತ್ತು ಕರ್ನಾಟಕದ ಖಾಸಗಿ ಫಾರ್ಮಸಿ ಕಾಲೇಜ್‌ಗಳಲ್ಲಿರುವ ಸರ್ಕಾರಿ ಕೋಟಾದ ಪ್ರಥಮ ವರ್ಷದ ಡಿ.ಫಾರ್ಮ್ ಕೋರ್ಸಿಗೆ (2020–21 ನೇ ಸಾಲಿಗೆ) ಪ್ರವೇಶಕ್ಕಾಗಿ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಪರೀಕ್ಷಾ ಪ್ರಾಧಿಕಾರ ಮಂಡಳಿ(ಡಿ. ಫಾರ್ಮ್) ವೆಬ್‌ಸೈಟ್ **http://www.beadpharmacy.org** ಮೂಲಕವೇ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ದಿನಾಂಕ 01–12–2020 ಮಧ್ಯರಾತ್ರಿ 12–00 ಗಂಟೆವರೆಗೆ. ನೇರ ಅಥವಾ ಅಂಚೆ ಮೂಲಕ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಯನ್ನು ದೂರವಾಣಿ ಸಂಖ್ಯೆ 080–22222681 **email: principal.gcp123@gmail.com** ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

# Application invited

**Bengaluru, November 23 (Karnataka Information)**

**Online applications are invited from the eligible candidate and for admission to Diploma in Pharmacy (First year D. Pharm) course at Government college of Pharmacy, P. Kalingarao Road, Subbaiah Circle, Bengaluru-27 and Government quota seats in Private Pharmacy colleges of Karnataka. Date of Online application will be received from 01-12-2020 till 12-00 midnight. (No hard copy is entertained) . Candidates can login to the website: http://www.beadpharmacy.org for further information. For further information can be contact 080-22222681 email principal.gcp123@gmail.com says official press release.**

# ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ):

ನಗರಾಭಿವೃದ್ಧಿ ಸಚಿವ ಬಿ. ಎ. ಬಸವರಾಜ ಅವರು ನವೆಂಬರ್ 25 ರಂದು ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## DAK ADALAT AT SOUTH DIVISION

**Bengaluru, November 23 (Karnataka Information)**

**Divisional Dak Adalat will be held at Office of Senior Superintendent of Post Offices, Jayanagar Head Post office building 2 nd floor 11th Main, 4th T Block, Bengaluru -560 041 on 7th December at 11-00 a.m.**

## Time Extended

**Bengaluru, November 23 (Karnataka Information)**

**The last date for online registration of All India Sainik Schools Entrance Examination for the admission in class VI and IX for the academic session 2021-22 scheduled to be held on 10th January 2021 has been extended till 3rd December 2020. Further details are available in Information Bulletin at the Sainik School Bijapur website www.ssbj.in and National Testing Agency (NTA) website https://aissee.nta.nic.ac.in**

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ):

ಕರ್ನಾಟಕ ಲೋಕಸೇವಾ ಆಯೋಗ ದಿನಾಂಕ: 19–02–2018ರಲ್ಲಿ ಅಧಿಸೂಚಿಸಲಾಗಿದ್ದ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯದ ಕಿರಿಯ ತರಬೇತಿ ಅಧಿಕಾರಿ ಹುದ್ದೆಗಳಲ್ಲಿನ ಡ್ರಾಫ್ಟ್‌ಮೆನ್ ಸಿವಿಲ್ ವೃತ್ತಿ– 3+1(ಹೈ.ಕ) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಕಟ್–ಆಫ್ ಅಂಕಗಳೊಂದಿಗೆ ದಿನಾಂಕ:

19–11–2020ರಂದು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ಅಂತರ್ಜಾಲ http://kpsc.kar.nic.in ನಲ್ಲಿ ಪ್ರಕಟಿಸಲಾಗಿದೆ. ಈ ಸಂಬಂಧ ಆಕ್ಷೇಪಣೆಗಳಿದ್ದಲ್ಲಿ, ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾದ ದಿನಾಂಕದಿಂದ 7 ದಿನಗಳೊಳಗಾಗಿ 'ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–01' ಇವರಿಗೆ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ವಸತಿ ಸಚಿವರ ಪ್ರವಾಸ ರದ್ದು

**ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ):**

ವಸತಿ ಸಚಿವ ವಿ. ಸೋಮಣ್ಣ ಅವರ ನವೆಂಬರ್ 24 ರ ರಾಮನಗರ ಜಿಲ್ಲೆಯ ಪ್ರವಾಸ ಕಾರ್ಯಕ್ರಮವನ್ನು ರದ್ದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.